ಶ್ರೀ ಹೆಚ್ ಡಿ ಕುಮಾರಸ್ವಾಮಿ (ಮಾನ್ಯ ಮುಖ್ಯಮಂತ್ರಿಗಳು)

ಅ) ಬಂದಿದೆ

ಆ) ಹನೂರು ಹಾಗೂ ಮಾರ್ಗಮಧ್ಯದ ಹಳ್ಳಿಗಳಿಗೆ ಕುಡಿಯುವ ನೀರು ಸರಬರಾಜು ಮಾಡಲು ಯೋಜನೆಯ ಅಂದಾಜು ವೆಚ್ಚ ರೂ 1387 00 ಲಕ್ಷಗಳಿದ್ದು, ಇದಕ್ಕೆ ಆರ್ಥಿಕ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಸಹಮತಿ ನೀಡಿರುತ್ತದೆ ಜಲ ಸಂಪನ್ಮೂಲ ಇಲಾಖೆಯ ಸಹಮತಿಯನ್ನು ಕೋರಲಾಗಿದೆ ಸದರಿ ಇಲಾಖೆಯು ಸಹಮತಿ ನೀಡಿದ ಕೂಡಲೇ ಯೋಜನೆಗೆ ಆಡಳಿತಾತ್ಮಕ ಮಂಜೂರಾತಿ ನೀಡಲು ಪರಿಶೀಲಿಸಲಾಗುವುದು

ಇ) ಜಲ ಸಂಪನ್ಮೂಲ ಇಲಾಖೆಯ ಸಹಮತಿಯನ್ನು ಕೋರಲಾಗಿದೆ ಸದರಿ ಇಲಾಖೆಯು ಸಹಮತಿ ನೀಡಿದ ಕೂಡಲೇ ಯೋಜನೆಗೆ ಆಡಳಿತಾತ್ಮಕ ಮಂಜೂರಾತಿ ನೀಡಲು ಪರಿಶೀಲಿಸಲಾಗುವುದು

1489 (1888) ಶ್ರೀ ಬಿ ಆರ್ ಪಾಟೀಲ್ (ಆಳಂದ) – ಮಾನ್ಯ ಪೌರಾಡಳಿತ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಆಳಂದ ಪುರಸಭೆ ಆಡಳಿತ ಮಂಡಳಿಯ ಅವಧಿಯಲ್ಲಿ ಅವ್ಯವಹಾರಗಳು ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಹಾಗಿದ್ದಲ್ಲಿ, ಅವ್ಯವಹಾರಕ್ಕೆ ಕಾರಣರಾದ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಆರ್ ಶ್ರೀನಿವಾಸ (ಪೌರಾಡಳಿತ ಸಚಿವರು)

ಅ) ಬಂದಿದೆ

ಆ) ಆಳಂದ ಪುರಸಭೆಯ ಅವ್ಯವಹಾರಗಳ ಬಗ್ಗೆ ಪುರಸಭೆಯ ಆಡಳಿತಾಧಿಕಾರಿಗಳು ಹಾಗೂ ಸಹಾಯಕ ಆಯುಕ್ತರ ವರದಿ ಆಧಾರದ ಮೇಲೆ ಪ್ರಭಾರ ಮುಖ್ಯಾಧಿಕಾರಿ

ಶೀ ರಿಯಾಜುದ್ದೀನ್ (ಉಪ–ತಹಶೀಲ್ದಾರ್, ನಾಡಕಛೇರಿ, ಕಜೂರಿ, ಗುಲಬರ್ಗಾ ಜಿಲ್ಲೆ) ಇವರನ್ನು ಗುಲಬರ್ಗಾ ಜಿಲ್ಲಾಧಿಕಾರಿಗಳು ಅಮಾನತ್ತುಗೊಳಿಸಿದ್ದಾರೆ ಹೆಚ್ಚಿನ ತನಿಖೆ ನಡೆಸಲು ಆದೇಶಿಸಿದ್ದು, ತನಿಖೆ ಪ್ರಾರಂಭಿಸಲಾಗುತ್ತಿದೆ

1490 (1889) ಶ್ರೀ ಪಾಟೀಲ್ ಬಿ ಆರ್ (ಆಳಂದ) – ಮಾನ್ಯ ಗೃಹ, ಕಾನೂನು ನ್ಯಾಯ ಮತ್ತು ಮಾನವ ಹಕ್ಕುಗಳ ಹಾಗೂ ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗೌರವಾನ್ವಿತ ರಾಷ್ಟ್ರಪತಿಗಳು ಗುಲಬರ್ಗಾ ಜಿಲ್ಲೆಗೆ ಸುವರ್ಣ ಗ್ರಾಮೋದಯ ಯೋಜನೆಗೆ ಚಾಲನೆ ಕೊಡಲು ಬಂದಾಗ ಕಾರ್ಯಕ್ರಮದ ಮಧ್ಯದಲ್ಲಿ ನಡೆದ ಅಹಿತಕರ ಘಟನೆ ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಕಾರ್ಯಕ್ರಮ ವೈಫಲ್ಯಕ್ಕೆ ಅಧಿಕಾರಿಗಳೆ ಕಾರಣರೇ,

ಇ) ಹಾಗಿದ್ದಲ್ಲಿ, ಈ ಅಧಿಕಾರಿಗಳ ಮೇಲೆ ಯಾವ ಕ್ರಮ ಜರುಗಿಸಲಾಗಿದೆ?

ಶ್ರೀ ಎಂ ಪಿ ಪ್ರಕಾಶ್ (ಗೃಹ, ಕಾನೂನು ನ್ಯಾಯ ಮತ್ತು ಮಾನವ ಹಕ್ಕುಗಳ ಹಾಗೂ ಸಂಸದೀಯ ವ್ಯವಹಾರಗಳ ಸಚಿವರು)

ಅ) ಸರ್ಕಾರದ ಗಮನಕ್ಕೆ ಬಂದಿದೆ

ಆ) ಯಾವುದೇ ಅಧಿಕಾರಿಗಳ ಕಾರ್ಯ ವೈಫಲ್ಯತೆ ಕಂಡು ಬಂದಿರುವುದಿಲ್ಲ

ಇ) ಉದ್ಭವಿಸುವುದಿಲ್ಲ

1491 (1362) ಶ್ರೀ ಪಾಟೀಲ್ ಎಸ್ ಎಸ್ (ಮುಂಡರಗಿ) – ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗದಗ ಜಿಲ್ಲೆ ಮುಂಡರಗಿ ತಾಲ್ಲೂಕು ಶಿಂಗಟಾಲೂರು ಶ್ರೀ ವೀರಭದ್ರೇಶ್ವರ ದೇವಸ್ಥಾನ ಪ್ರವಾಸಿ ಕ್ಷೇತ್ರದಲ್ಲಿ ಸೇರಿದೆಯೇ,